# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1743 |
| ಮಾನ್ಯ ಸದಸ್ಯರ ಹೆಸರು | ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 14/03/2022 |
| ಉತ್ತರಿಸಬೇಕಾದ ಸಚಿವರು | ಮಾನ್ಯ ಆರೋಗ್ಯ & ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯಲ್ಲಿ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ ವ್ಯವಸ್ಥೆ ಕಲ್ಪಿಸುವಂತೆ ಬಹುಕಾಲದಿಂದ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ಇದುವರೆಗೂ ಜಿಲ್ಲೆಯಲ್ಲಿ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ ವ್ಯವಸ್ಥೆ ಕಲ್ಪಿಸದಿರಲು ಕಾರಣಗಳೇನು; | ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬೋಧಕ ಆಸ್ಪತ್ರೆಯಲ್ಲಿ ಮಲ್ಟಿಸ್ಪೆಷಾಲಿಟಿ ವಿಭಾಗಗಳಾದ ವೈದ್ಯಕೀಯ ವಿಭಾಗ, ಶಸ್ತ್ರ ಚಿಕಿತ್ಸಾ ವಿಭಾಗ, ಕೀಲು ಮತ್ತು ಮೂಳೆ ವಿಭಾಗ, ನೇತ್ರ ಚಿಕಿತ್ಸಾ ವಿಭಾಗ, ಅರವಳಿಕೆ ಶಾಸ್ತ್ರ ವಿಭಾಗ, ಕಿವಿ, ಮೂಗು, ಗಂಟಲು ವಿಭಾಗ, ಮಕ್ಕಳ ವಿಭಾಗ, ಸ್ತ್ರೀ ಮತ್ತು ಪ್ರಸೂತಿ ವಿಭಾಗ, ದಂತ ಚಿಕಿತ್ಸಾ ವಿಭಾಗ, ಕ್ಷಯ ರೋಗ ವಿಭಾಗ, ಚರ್ಮರೋಗ ವಿಭಾಗ, ಮನೋರೋಗ ವಿಭಾಗ, ಹಾಗೂ ರೇಡಿಯೋಲಜಿ ವಿಭಾಗಗಳು 2016 ರಿಂದಲೇ ಕಾರ್ಯ ನಿರ್ವಹಿಸುತ್ತಿದೆ. |
| ಇ) | ಜಿಲ್ಲೆಯಲ್ಲಿ, ಯಾವ ಕಾಲಮಿತಿಯೊಳಗೆ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ ವ್ಯವಸ್ಥೆ ಕಲ್ಪಿಸಲಾಗುವುದು; | ಈಗಾಗಲೇ ಸಂಸ್ಥೆಯ ವಿವಿಧ ವಿಭಾಗಗಳಲ್ಲಿ ಮಲ್ಟಿಸ್ಪೆಷಾಲಿಟಿ ಚಿಕಿತ್ಸೆಯನ್ನು ನೀಡಲಾಗುತ್ತಿದ್ದು, 450 ಹಾಸಿಗೆ ಸಾಮಾರ್ಥ್ಯದ ಆಸ್ಪತ್ರೆ ಕಟ್ಟಡ ಕಾಮಗಾರಿಯು ಪ್ರಗತಿಯಲ್ಲಿದ್ದು, ಜೂನ್ 2023 ರೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು. |
| ಈ) | ಕೊಡಗು ಜಿಲ್ಲೆ, ಮಡಿಕೇರಿಯ ಜಿಲ್ಲಾಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಕುರಿತು ಸರ್ಕಾರ ಇದುವರೆಗೆ ಯಾವ ಕ್ರಮಗಳನ್ನು ಕೈಗೊಂಡಿದೆ; ಜಿಲ್ಲಾಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಒದಗಿಸಿರುವ ಅನುದಾನದ ವಿವರಗಳೇನು? | ಕೊಡಗು ಜಿಲ್ಲೆ, ಮಡಿಕೇರಿಯ ಜಿಲ್ಲಾಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಸಲುವಾಗಿ 2016 ರಲ್ಲಿ ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಮಡಿಕೇರಿಗೆ ಹಸ್ತಾಂತರಿಸಲಾಗಿದ್ದು ಭಾರತೀಯ ವೈದ್ಯಕೀಯ ಮಂಡಳಿ ಹಾಗೂ ರಾಷ್ಟ್ರೀಯ ವೈದ್ಯಕೀಯ ಪರಿಷತ್ತು ನಿಯಮನುಸಾರ ಹಂತಹಂತವಾಗಿ ಎಲ್ಲಾ ರೀತಿಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಅಲ್ಲದೆ ಕೋವಿಡ್-19 ಸಂಬಂಧ ಸರ್ಕಾರದಿಂದ ವೆಂಟಿಲೇಟರ್, ಲಿಕ್ವಿಡ್ ಆಕ್ಸಿಜನ್ ಪ್ಲಾಂಟ್, ಆಕ್ಸಿಜನ್ ಜನರೇಟರ್ ಸೇರಿದಂತೆ ಅತ್ಯಾಧುನಿಕ ವೈದ್ಯಕೀಯ ಉಪಕರಣಗಳನ್ನು ಕೂಡ ಒದಗಿಸಲಾಗಿರುತ್ತದೆ. 2020ರಲ್ಲಿ ಸಂಸ್ಥೆಯ 450 ಹಾಸಿಗೆ ಸಾಮರ್ಥ್ಯದ ಕಟ್ಟಡ ನಿರ್ಮಾಣಕ್ಕಾಗಿ ರೂ. 10000.00ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿ, ಈವರೆವಿಗೂ ಒಟ್ಟು ರೂ.4800.00 ~~ಕೋಟಿ~~ ಲಕ್ಷ ರೂಪಾಯಿ ಅನುದಾನ ಬಿಡುಗಡೆಯಾಗಿರುತ್ತದೆ. |

ಕಡತ ಸಂ: ಎಂಇಡಿ 121 ಎಂ ಎಸ್ ಎಫ್ 2022

(ಡಾ|| ಕೆ. ಸುಧಾಕರ್)
ಆರೋಗ್ಯ & ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು.